# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** ದಿನಾಂಕ: 20.10.2011

## *ಮತದಾರರ ಪಟ್ಟಿ ಪರಿಷ್ಕರಣೆ ಆಂದೋಲನ-2011, ದಿನಾಂಕ: 13.10.2011 ರಿಂದ 31.10.2011*

ಭಾವಚಿತ್ರ ಸಹಿತ ಮತದಾರರ ಪಟ್ಟಿ ತಯಾರಿಸುವುದು ಮತ್ತು ಮತದಾರರ ಗುರುತಿನ ಚೀಟಿ ನೀಡುವ ಆಂದೋಲನ ಕಾರ್ಯಕ್ರಮವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ 198 ವಾರ್ಡ್‌ಗಳಲ್ಲಿ ಒಂದೊಂದು ಕೌಂಟರ್‌ಗಳನ್ನು ತೆರೆಯಲಾಗಿದ್ದು, ದಿನಾಂಕ: 13.10.2011 ರಿಂದ 31.10.2011 ರವರೆಗೆ ವಿಧಾನಸಭಾ ಕ್ಷೇತ್ರವಾರು ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ನಡೆಸಲಾಗುತ್ತದೆ. ತಾವುಗಳು ತಮ್ಮ ತಮ್ಮ ಹತ್ತಿರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಹ ಕಂದಾಯ ಅಧಿಕಾರಿಗಳು / ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಹಾಗೂ ಅವರ ವ್ಯಾಪ್ತಿಗೆ ಬರುವ ಸೇವಾ ಕೇಂದ್ರಗಳಲ್ಲಿ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇದೆಯೇ ಎಂಬುವುದನ್ನು ಖಚಿತ ಪಡಿಸಿಕೊಳ್ಳುವ ಬಗ್ಗೆ ಭಾಗವಾರು ಮತದಾರರ ಪಟ್ಟಿಯನ್ನು ಸಾರ್ವಜನಿಕರ ಅವಗಾಹನೆಗೆ ಪ್ರಚುರಪಡಿಸಲಾಗಿದೆ ಹಾಗೂ ಕರಡು ಮತದಾರರ ಪಟ್ಟಿಯನ್ನು www.ceokarnataka.kar.nic.in ನಲ್ಲಿ ಸಹ ನೋಡಬಹುದಾಗಿದೆ. ಸದರಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರಿದ್ದು, ಭಾವಚಿತ್ರವಿಲ್ಲದಿದ್ದರೆ ದಯವಿಟ್ಟು ಎರಡು ಬಣ್ಣದ ಭಾವಚಿತ್ರಗಳನ್ನು ನೀಡುವುದು. ಒಂದು ವೇಳೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇದ್ದು, ಭಾವಚಿತ್ರವನ್ನು ನೀಡದ ಪಕ್ಷದಲ್ಲಿ ಅಂತಹವರ ಹೆಸರನ್ನು ಮತದಾರರ ಪಟ್ಟಿಯಿಂದ ನಿಯಮಾನುಸಾರ ತೆಗೆದುಹಾಕಲು ಕ್ರಮ ವಹಿಸಲಾಗುವುದು.

ದಿನಾಂಕ: 01.01.2012 ಕ್ಕೆ 18 ವರ್ಷ ತುಂಬುವ ಯುವಕ / ಯುವತಿಯರು ಆಂದೋಲನ ಅವಧಿಯಲ್ಲಿ ಭಾಗವಹಿಸಿ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಿಕೊಳ್ಳಬಹುದಾಗಿದೆ.

ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರಿಸುವ, ತೆಗೆದುಹಾಕುವ, ತಿದ್ದುಪಡಿ ಮಾಡುವ ಹಾಗೂ ಹೆಸರನ್ನು ಒಂದು ಭಾಗದಿಂದ ಮತ್ತೊಂದು ಭಾಗಕ್ಕೆ ವರ್ಗಾಯಿಸುವ ಸಂಬಂಧ, ಹೆಚ್ಚಿನ ಮಾಹಿತಿಗಾಗಿ, ತಮ್ಮ ಹತ್ತಿರದ ಪಾಲಿಕೆಯ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಈ ಆಂದೋಲನ ಅವಧಿಯಲ್ಲಿ ಸಂಪರ್ಕಿಸಲು ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ವಿನಂತಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 20.10.2011**

## ***ಬೆಂಗಳೂರು ಪದವೀಧರರ ಕ್ಷೇತ್ರ-2011ರ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ***

ಬೆಂಗಳೂರು ಪದವೀಧರರ ಕ್ಷೇತ್ರ-2011ರ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಯ ಸಂಬಂಧ ಮತದಾರರ ನೋಂದಣಿ ನಿಯಮಗಳು 1960ರ ನಿಯಮ (31)3ರನ್ವಯ ಸಾರ್ವಜನಿಕ ಸೂಚನೆಯನ್ನು ದಿನಾಂಕ: 01.10.2011 ರಂದು ಬೆಂಗಳೂರು ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ನಿರ್ದಿಷ್ಟಾಧಿಕಾರಿಗಳ ಕಛೇರಿಗಳಲ್ಲಿ ಸಹಾಯಕ ಮತದಾರರ ನೋಂದಣಾಧಿಕಾರಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯಲ್ಲಿ ಸಾರ್ವಜನಿಕರ ಪ್ರಕಟಣೆಗಾಗಿ ಪ್ರಚುರಪಡಿಸಲಾಗಿದೆ. ತಾವುಗಳು ತಮ್ಮ ತಮ್ಮ ಹತ್ತಿರದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನಿರ್ದಿಷ್ಟಾಧಿಕಾರಿಗಳು / ಕಂದಾಯ ಅಧಿಕಾರಿಗಳು / ಸಹ ಕಂದಾಯ ಅಧಿಕಾರಿಗಳು / ಅಪರ ನಿರ್ದಿಷ್ಟಾಧಿಕಾರಿಗಳ ಕಛೇರಿಯಲ್ಲಿ ಹೊಸದಾಗಿ ತಮ್ಮ ಹೆಸರು ಸೇರ್ಪಡೆ, ತಿದ್ದುಪಡಿ ಅಥವಾ ತೆಗೆದು ಹಾಕುವ ಪ್ರಕ್ರಿಯೆಗೆ ಅವಕಾಶವನ್ನು ದಿನಾಂಕ: 31.10.2011 ರವರೆಗೆ ಕಲ್ಪಿಸಲಾಗಿದೆ. ದಿನಾಂಕ: 31.10.2011ರ ಮುಂಚಿತವಾಗಿ ಅರ್ಹ ಪದವೀಧರರು ತಮ್ಮ ಹೆಸರನ್ನು ಅರ್ಜಿಯ ನಮೂನೆ-18 ರಲ್ಲಿ ಬೆಂಗಳೂರು ಪದವೀಧರರ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. ನಮೂನೆ-18ರ ಅರ್ಜಿಯನ್ನು ಮೇಲ್ಕಂಡ ಕಛೇರಿಗಳಲ್ಲಿ ಲಭ್ಯವಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ, ತಮ್ಮ ಹತ್ತಿರದ ಪಾಲಿಕೆಯ ನಿರ್ದಿಷ್ಟಾಧಿಕಾರಿಗಳು / ಕಂದಾಯ ಅಧಿಕಾರಿಗಳು ಹಾಗೂ ಸಹ ಕಂದಾಯ ಅಧಿಕಾರಿಗಳು / ಅಪರ ನಿರ್ದಿಷ್ಟಾಧಿಕಾರಿಗಳನ್ನು ಸಂಪರ್ಕಿಸಲು ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಬೆಂಗಳೂರು ಪದವೀಧರರ ಕ್ಷೇತ್ರ ಹಾಗೂ ಉಪ ಆಯುಕ್ತರು (ಆಡಳಿತ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ವಿನಂತಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**